# ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು - 560 001

**ಮಂಜೂರಾತಿ ನೀಡಿದ ಕಛೇರಿ ವಿಳಾಸ:** ಉಪನಿರ್ದೇಶಕರ ಕಛೇರಿ.ಸಾರ್ವಜನಿಕ ಶಿಕ್ಷಣ ಇಲಾಖೆ,ಮೈಸೂರು ಜಿಲ್ಲೆ, ಮೈಸೂರು

ಸಂಖ್ಯೆ: ಜಿ3/ಹೊ.ಶಾ.ನೋಂ/67/2017-18 **ನಮೂನೆ-2** ದಿನಾಂಕ: 07/10/2017

**[ನಿಯಮ 3 ಉಪನಿಯಮ 5(ಬಿ)**

**ಪ್ರಮಾಣ ಪತ್ರ ಸಂಖ್ಯೆ:** 48/2017-18

**ದಿ ಪ್ರೆಶಿಯಸ್ ಎಜುಕೇಷನಲ್ ಸೊಸೈಟಿ,.ಆರಾಧನಾ ಅರಕೆರೆ, ಐ ಐ ಎಂ ಪೋಸ್ಟ್, ಬೆಂಗಳೂರು-560076**

ಇವರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ ಯಕ್ಸ್ 1995) ಸೆಕ್ಷನ್ 31 ರಂತೆ ಹಾಗೂ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ : ಇಡಿ 44 ಪಿ.ಜಿ.ಸಿ. 2002 ದಿನಾಂಕ: 11.06.2002ರ ಪ್ರಕಾರ ಮತ್ತು ಸರ್ಕಾರದ ಅಧಿಸೂಚನೆ ಪತ್ರ ಸಂಖ್ಯೆ : ಇಡಿ 09 ಪಿಜಿಸಿ 2017 ದಿನಾಂಕ: 07.01.2017 ರನ್ವಯ ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ (ಕಿರಿಯ/ ಹಿರಿಯ ಪ್ರಾಥಮಿಕ ಶಾಲೆಗಳ) ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | |
|---|---|
| 1. ಅರ್ಜಿ ಸಂಖ್ಯೆ : | 294633 |
| 2. ಕ್ರಮ ಸಂಖ್ಯೆ : | 48 |
| 3. ಶಾಲೆಯ ಹೆಸರು ಮತ್ತು ವಿಳಾಸ : | **ಸೆಂಟ್ ಮರಿಯಾ ಥಿ ಮಥಿಯಾಸ್ ಕಿರಿಯ ಪ್ರಾಥಮಿಕ ಶಾಲೆ**<br>**152/2, ಮಾನಂದವಾಡಿ ರಸ್ತೆ, ಶ್ರೀರಾಂಪುರ ಅಂಚೆ, ಮೈಸೂರು - 560076** |
| 4. ಅನುಮತಿ ನೀಡಿದ ತರಗತಿ : | **1 ರಿಂದ 5ನೇ ತರಗತಿ** |
| 5. ಶೈಕ್ಷಣಿಕ ವರ್ಷ : | **2017-18** |
| 6. ಅನುಮತಿ ನೀಡಿದ ಮಾಧ್ಯಮ : | **ಇಂಗ್ಲೀಷ್** |

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಕ್ರಮ ಸಂಖ್ಯೆ / ಪುಟ ಸಂಖ್ಯೆ/ ವಾಲ್ಯೂಂ ಸಂಖ್ಯೆ : 48 / 08-09 / 04

**ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೋಂದಣಿ) ಅನುಮತಿಯನ್ನು ರದ್ದು ಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.**

1. ಈ ನೋಂದಣಿಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಶಿಕ್ಷಣ ಸಂಸ್ಥೆಗಳು ನಿಯಂತ್ರಣ, ವರ್ಗೀಕರಣ) ನಿಯಮ-1997 ನಿಯಮ-3(5)(ಡಿ) ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
2. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ, ಮತ್ತು ಪಠ್ಯವಸ್ತು ನಿಗದೀಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8 ರನ್ವಯ ಸುರಕ್ಷತಾ ಕ್ರಮವಾಗಿ ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಚಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಿರಬೇಕು. ಶಾಲಾ ಆವರಣದಲ್ಲಿರುವ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ. ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು; ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
3. ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್-4(5) ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಶಿಕ್ಷಣ ಸಂಸ್ಥೆಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಶಿಕ್ಷಣ ಸಂಸ್ಥೆಯು ಅದೇ ಸ್ಥಳದಲ್ಲಿ ಮತ್ತು ಅದೇ ಹೆಸರಿನಲ್ಲಿ ಶಾಲೆ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಸ್ಥಳಾಂತರಿಸತಕ್ಕದ್ದಲ್ಲ ಮತ್ತು ಹಸ್ತಾಂತರಿಸತಕ್ಕದ್ದಲ್ಲ.

6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ್‌ಯಕ್ಟ್ ಸಂಖ್ಯೆ : 1:95) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.

7. ಈ ಪ್ರಾಥಮಿಕ ಶಾಲಾ ನೋಂದಣಿಯು ಸರ್ಕಾರಿ ಅಧಿಸೂಚನೆ ಸಂಖ್ಯೆ : ಇಡಿ 175 ಪಿ.ಎಂ.ಸಿ 95 ದಿನಾಂಕ: 07.07.1998 ಮತ್ತು 29.12.1998ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ.

8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮಗಳು 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ಅವುಗಳಿಗೆ ಬದ್ಧವಾಗಿರತಕ್ಕದ್ದು.

9. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗದೀಕರಣ ಇತ್ಯಾದಿ) ನಿಯಮಾವಳಿಗಳು 1995 ದಿನಾಂಕ: 04.10.1996ರ ನಿಯಮ - 10 ರಂತೆ ಟರ್ಮ್ ಶುಲ್ಕ, ಬೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ 10(04) ರಂತೆ ಶಾಲೆಯಲ್ಲಿ ವಿದ್ಯಾರ್ಥಿ/ಪೋಷಕರಿಂದ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ ಬ್ರೋಚರ್ ಅನ್ನು ಶಾಲೆಯ ಸೂಚನಾ ಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ಅದರ ಒಂದು ಪ್ರತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮತ್ತು ಉಪನಿರ್ದೇಶಕರಿಗೆ ಸಲ್ಲಿಸತಕ್ಕದ್ದು. ಈ ಬಗ್ಗೆ ಕಾಲದಿಂದ ಕಾಲಕ್ಕೆ ಹೊರಡಿಸುವ ಇಲಾಖೆಯ ಸುತ್ತೋಲೆಯಲ್ಲಿನ ಅಂಶಗಳನ್ನು ಪಾಲಿಸತಕ್ಕದ್ದು.

10. ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ 39 ವಿವಿಧ-99 ದಿನಾಂಕ: 14.03.2000 ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ರೆಗ್ಯುಲೇಷನ್ ಆಫ್ ಸರ್ಟನ್ ಫೀಸ್ ಅಂಡ್ ಡೊನೇಷನ್ಸ್) ನಿಯಮ - 1999ರ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಈ ನಿಯಮದಂತೆ ಯಾವುದೇ ವಂತಿಗೆಯನ್ನು ವಸೂಲು ಮಾಡುವಂತಿಲ್ಲ. ಈ ಬಗ್ಗೆ ಕಾಲದಿಂದ ಕಾಲಕ್ಕೆ ಹೊರಡಿಸುವ ಇಲಾಖೆಯ ಸುತ್ತೋಲೆಯಲ್ಲಿನ ಅಂಶಗಳನ್ನು ಪಾಲಿಸತಕ್ಕದ್ದು.

11. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್‌ಯಕ್ಟ್ 1 ಆಫ್ 1995) ಪ್ರಕಾರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ 131 ವಿವಿಧ 98 ದಿನಾಂಕ: 04.11.1999 ರಂತೆ ಮಾನ್ಯತೆ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ : ಇಡಿ 137 ವಿವಿಧ 98 ದಿನಾಂಕ: 19.05.1999 ರ ಪ್ರಕಾರ ಸಮಕ್ಷ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ . ಇಡಿ 369 ಪಿ.ಜಿ.ಸಿ 2014 ದಿನಾಂಕ: 11.11.2014 ಹಾಗೂ ಸಂಬಂಧಿತ ತಿದ್ದುಪಡಿ ಆದೇಶದಲ್ಲಿ ಸೂಚಿಸಿರುವಂತೆ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಮಾನ್ಯತೆ ನವೀಕರಿಸುವ ಪ್ರಾಧಿಕಾರ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.

12. ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ 52 ವಿವಿದ 99 ದಿನಾಂಕ: 02.02.2000 ರ ಅನೆಕ್ಸರ್-5 ರ ನಿಯಮದಂತೆ ಅನುಮತಿ ಪಡೆದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು.

13. 6 ರಿಂದ 8ನೇ ತರಗತಿಗೆ ಬಿ.ಇಡಿ ತರಬೇತಿ ಹೊಂದಿದ ಶಿಕ್ಷಕರನ್ನು ನೇಮಿಸಿಕೊಳ್ಳತಕ್ಕದ್ದು.

14. ಕರ್ನಾಟಕ ಶಿಕ್ಷಣ ಮಸೂದೆಯ ನಿಯಮಗಳಂತೆ ಶಾಲೆಗೆ ಒದಗಿಸಬೇಕಾದ ಮೂಲಭೂತ ಸೌಕರ್ಯಗಳಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ, ಆಟದ ಮೈದಾನ ಮತ್ತು ಶಾಲಾ ಕಟ್ಟಡವನ್ನು ಒದಗಿಸಿಕೊಂಡಿರತಕ್ಕದ್ದು.

15. ಶಾಲಾ ಕೆಲಸದ ಅವಧಿ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

16. ಶಾಲೆಯನ್ನು ಪ್ರಾರಂಭಿಸಿ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ವರದಿ ಸಲ್ಲಿಸುವುದು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂದ ತಾನೇ ರದ್ದಾಗುವುದು.

17. ಈಗಾಗಲೇ ಶಾಲೆಯಲ್ಲಿ 1 ರಿಂದ ನೇ ತರಗತಿ ಕನ್ನಡ ಮಾಧ್ಯಮ ಇದ್ದಲ್ಲಿ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಕನ್ನಡ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆ ಬಾರದಂತೆ ನೋಡಿಕೊಳ್ಳುವುದು.

18. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 27 ಎಸ್‌ಇಪಿ 03 ದಿನಾಂಕ: 13.02.2003 ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ ಶಾಲೆಯಲ್ಲಿ ನೇಮಕಗೊಂಡಿರುವ ಶಿಕ್ಷಕ/ಸಿಬ್ಬಂದಿ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲು ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.

19. ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ತಪ್ಪದೇ ನಿಯೋಜಿಸುವುದು.

20. ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು. 21. ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ: 50ಕ್ಕೆ ಮೀರಬಾರದು.

22. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.

23. ಸರ್ಕಾರದ ಪತ್ರ ಸಂಖ್ಯೆ: ಇಡಿ 122 ಎಸ್‌ಇಎಸ್ 2007 ದಿನಾಂಕ: 17.05.2007 ರ ಪತ್ರದಲ್ಲಿನ ಷರತ್ತುಗಳನ್ನು ಪೂರೈಸತಕ್ಕದ್ದು.

6-8th

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ.

ಉಪನಿರ್ದೇಶಕರ ಕಚೇರಿ, ಮೈಸೂರು ಜಿಲ್ಲೆ,ಮೈಸೂರು

ಮಂಜೂರಾತಿ ನೀಡಿದ ಕಛೇರಿ ವಿಳಾಸ:

ಉಪನಿರ್ದೇಶಕರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಮೈಸೂರು ಜಿಲ್ಲೆ,ಮೈಸೂರು

ದಿನಾಂಕ: 03-Jun-2019

[ನಿಯಮ 3 ಉಪನಿಯಮ 5(ಬಿ)

ಪ್ರಮಾಣ ಪತ್ರ ಸಂಖ್ಯೆ: 13560/2019-20

ST MARIA DE MATTIAS SCHOOL ( SRIRAMPURA POST RING ROAD JUNCTION MYSURU 570008 )

ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯು ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸೆಕ್ಷನ್ 31ರಂತೆ ಈ ಕೆಳಕಂಡ To Uplift the poor and the needy by education in the society... ಪ್ರಾರಂಭಿಸಲು ಮಂಜೂರಾತಿ ನೀಡಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

1. ಅರ್ಜಿ ಸಂಖ್ಯೆ : 190064
2. ಕ್ರಮ ಸಂಖ್ಯೆ : 13560
3. ಶಾಲೆಯ ಹೆಸರು ಮತ್ತು ವಿಳಾಸ : ST MARIA DE MATTIAS SCHOOL ( SRIRAMPURA POST RING ROAD JUNCTION MYSURU 570008 )
4. ಅನುಮತಿ ನೀಡಿದ ತರಗತಿ : Upgradation from 6 to 8
5. ಶೈಕ್ಷಣಿಕ ವರ್ಷ : 2019-20
6 ಅನುಮತಿ ನೀಡಿದ ಮಾಧ್ಯಮ : English

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ : 04/28/04

ಷರತ್ತುಗಳು

1. ಈ ನೋಂದಾವಣೆಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

ಮುಂದುವರೆದಿದೆ...

6. ಈ ಪ್ರೌಢಶಾಲಾ ನೋಂದಾವಣೆಯಂತೆ ಸರ್ಕಾರಿ ಅಧಿಸೂಚನೆ ನಂ: ಇಡಿ:175:ಪಿಎಂಸಿ:95, ದಿ:07-09-1998 ಮತ್ತು ದಿ:29-12-1998ರ ಪ್ರಕಾರ ರಾಜ್ಯದ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10-00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
7. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

8. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

10. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕರ್ನಾಟಕ ಶಿಕ್ಷಣ ಕಾಯ್ದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೋಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

11. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಬೋಧನೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಶ್ವತ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

14. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗೆ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

15. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

16. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು. ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007 ಅನುಬಂಧ-3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

17. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಿಸುವುದು.

18. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.

19. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 14.11.2014ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

20. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 709 ಪಿ.ಜಿ.ಸಿ 2017, ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಉಪನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಮೈಸೂರು ಜಿಲ್ಲೆ,ಮೈಸೂರು

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ,
2. ಕಾರ್ಯದರ್ಶಿಗಳು, ST MARIA DE MATTIAS SCHOOL (SRIRAMPURA POST RING ROAD JUNCTION MYSURU 570008)
St maria de mattias srirampura mysore-570008
3. ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು - 560 001**

24. ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಮಾತ್ರ ಶಾಲೆಯನ್ನು ನಡೆಸತಕ್ಕದ್ದು.

25. ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಮಾತ್ರ ಶಾಲೆಯನ್ನು ನಡೆಸತಕ್ಕದ್ದು.

26. ಶಾಲೆಯಲ್ಲಿ ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಶಿಕ್ಷಣ ಇಲಾಖೆ ಮತ್ತು ಗೃಹ ಇಲಾಖೆಗಳು ಹೊರಡಿಸಿರುವ ಮಾರ್ಗಸೂಚಿಯನ್ವಯ ಎಲ್ಲಾ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಅಗತ್ಯ ಎಲ್ಲಾ ಭದ್ರತಾ ಉಪಕರಣಗಳನ್ನು ಕಡ್ಡಾಯವಾಗಿ ಅಳವಡಿಸಿರಬೇಕು ಮತ್ತು ಸುಸ್ಥಿತಿಯಲ್ಲಿಡಬೇಕು

27. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿಜಿಸಿ 2014 ದಿನಾಂಕ: 11.11.2014 ಹಾಗೂ ಸಂಬಂಧಿತ ತಿದ್ದುಪಡಿ ಆದೇಶದಲ್ಲಿ ಸೂಚಿಸಿರುವಂತೆ ಶಾಲೆಯ ಮೂಲಭೂತ ಸೌಲಭ್ಯ ಹಾಗೂ ಇತರ ಷರತ್ತುಗಳನ್ನು ಕಡ್ಡಾಯವಾಗಿ ಪೂರೈಸತಕ್ಕದ್ದು ಹಾಗೂ ಈ ಕುರಿತು ಪ್ರಥಮ ಮಾನ್ಯತೆ ನೀಡುವ ಸಂದರ್ಭದಲ್ಲಿ ಪರಿಶೀಲಿಸಿ ಮಾನ್ಯತೆ ನೀಡಲಾಗುವುದು.

28. ವ್ಯಾಪ್ತಿಯಲ್ಲಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಯು ನೋಂದಣಿ ನಿಯಮಗಳಂತೆ ನಡೆಯುತ್ತಿರುವ ಬಗ್ಗೆ ಸೂಕ್ತ ನಿಗಾವಹಿಸತಕ್ಕದ್ದು.

29. ನೋಂದಣಿಯ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿರುವುದು ಕಂಡು ಬಂದಲ್ಲಿ ಏಕಪಕ್ಷೀಯವಾಗಿ ನೋಂದಣಿಯನ್ನು ಹಿಂಪಡೆಯುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

30. ಸ್ವಾಭಾವಿಕ ಬೆಳವಣಿಗೆ ಆಧಾರದ ಮೇಲೆ ತರಗತಿಗಳನ್ನು ಮಾತ್ರ ಪ್ರಾರಂಭಿಸುವುದು.

(ಡಾ.ಬಿ.ಕೆ.ಎಸ್.ವರ್ಧನ್)
ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲೆ.
ಸಾರ್ವಜನಿಕ ಶಿಕ್ಷಣ ಇಲಾಖೆ,
ಮೈಸೂರು

ಗೆ,

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ : ಮೈಸೂರು ಗ್ರಾಮಾಂತರ

2. ಕಾರ್ಯದರ್ಶಿಗಳು, ದಿ ಪ್ರೆಶಿಯಸ್ ಎಜುಕೇಷನಲ್ ಸೊಸೈಟಿ,,ಆರಾಧನಾ ಆರಕೆರೆ, ಐ ಐ ಎಂ ಪೋಸ್ಟ್, ಬೆಂಗಳೂರು-560076

3. ಕಛೇರಿ ಪ್ರತಿ..